15. ವಾರ್ಷಿಕ ವರದಿ ಮತ್ತು ಲೆಕ್ಕ ಪರಿಶೋಧನಾ ವರದಿಯನ್ನು ರಾಜ್ಯ ವಿಧಾನ ಮಂಡಲದಲ್ಲಿ ಮಂಡಿಸತಕ್ಕದ್ದು : ರಾಜ್ಯ ಸರ್ಕಾರವು ಆಯೋಗವು ವಾರ್ಷಿಕ ವರದಿಯಲ್ಲಿ ನೀಡಿರುವ ಶಿಫಾರಸುಗಳು, ಅವು ರಾಜ್ಯಕ್ಕೆ ಸಂಬಂಧಪಡುವಷ್ಟರ ಮಟ್ಟಿಗೆ ಅವುಗಳ ಬಗ್ಗೆ ಕೈಗೊಂಡ ಕ್ರಮಗಳು ಮತ್ತು ಅಂಥ ಶಿಫಾರಸ್ಸುಗಳು ಯಾವುದಾದರೂ ಇದ್ದಲ್ಲಿ, ಅವುಗಳನ್ನು ಒಪ್ಪಿಕೊಳ್ಳದಿರುವುದಕ್ಕೆ ಕಾರಣಗಳ ಜ್ಞಾಪನದೊಂದಿಗೆ ವರದಿಗಳನ್ನು ಸ್ವೀಕರಿಸಿದ ನಂತರ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು. ಆಯೋಗವು ಅದರ ವಿವೇಚನಾನುಸಾರವಾಗಿ ಸಾರ್ವಜನಿಕ ಪ್ರಾಮುಖ್ಯತೆಯನ್ನು ಹೊಂದಿರುವ ಯಾವುದೇ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಾಲಕಾಲಕ್ಕೆ ಸಲ್ಲಿಸಬಹುದು.

ಅಧ್ಯಾಯ - V

ಸಂಕೀರ್ಣ

16. ಆಯೋಗದ ಅಧ್ಯಕ್ಷ, ಸದಸ್ಯರು ಮತ್ತು ನೌಕರರು ಲೋಕ ನೌಕರರಾಗಿರತಕ್ಕದ್ದು : ಆಯೋಗದ ಅಧ್ಯಕ್ಷ, ಸದಸ್ಯರು ಮತ್ತು ನೌಕರರನ್ನು ಭಾರತ ದಂಡಸಂಹಿತೆಯ 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕನೌಕರರೆಂಬುದಾಗಿ ಭಾವಿಸತಕ್ಕದ್ದು.

17. ನಿಯಮಗಳನ್ನು ರಚಿಸಲು ಅಧಿಕಾರ : (1) ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆ ನೀಡುವ ಮೂಲಕ ಈ ಅಧಿನಿಯಮದ ಉಪಬಂಧಗಳನ್ನು ನೆರವೇರಿಸುವ ಉದ್ದೇಶಗಳಿಗಾಗಿ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಮೇಲೆ ತಿಳಿಸಿದ ಅಧಿಕಾರಗಳ ಸಾಮಾನ್ಯತೆಗೆ ಪ್ರತಿಕೂಲವಾಗದಂತೆ ಅಂಥ ನಿಯಮಗಳು ಈ ಮುಂದಿನ ಎಲ್ಲ ಅಥವಾ ಯಾವುದೇ ವಿಷಯದ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ, .

(ಎ)

4ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ಅಧ್ಯಕ್ಷ ಮತ್ತು ಸದಸ್ಯರಿಗೆ ಮತ್ತು 5ನೇ ಪ್ರಕರಣದ (2)ನೇ ಉಪಪ್ರಕರಣದ ಅಡಿಯಲ್ಲಿ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡಬಹುದಾದ ವೇತನಗಳು ಮತ್ತು ಭತ್ಯೆಗಳು ಮತ್ತು ಅವರ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ;

(ಬಿ) 13ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ತಯಾರಿಸತಕ್ಕ ವಾರ್ಷಿಕ ವಿವರ ಮತ್ತು ಲೆಕ್ಕಪತ್ರಗಳ ನಮೂನೆ.

(ಸಿ) 14ನೇ ಪ್ರಕರಣದ ಅಡಿಯಲ್ಲಿ ತಯಾರಿಸತಕ್ಕಂಥ ವಾರ್ಷಿಕ ವರದಿಯ ನಮೂನೆ ಮತ್ತು ಸಮಯ.

(ಡಿ) ನಿಯಮಿಸುವುದು ಅಗತ್ಯವಾದಂಥ ಅಥವಾ ನಿಯಮಿಸಬಹುದಾದಂಥ ಇತರ ಯಾವುದೇ ವಿಷಯಗಳು.

(3) ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಪ್ರತಿಯೊಂದು ನಿಯಮವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಒಂದು ಅಧಿವೇಶನ ಅಥವಾ ಎರಡು ಅನುಕ್ರಮ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರಗೆ ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಹೀಗೆ ಮಂಡಿಸಲಾದ ಅಧಿವೇಶನ

ಅಥವಾ ನಿಕಟೋತ್ತರ ಅಧಿವೇಶನಗಳು ಮುಕ್ತಾಯವಾಗುವ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಒಪ್ಪಿದರೆ ಅಥವಾ ನಿಯಮವನ್ನು ಮಾಡಬಾರದೆಂದು ತೀರ್ಮಾನಿಸಿದರೆ ತದನಂತರ ಆ ನಿಯಮವು, ಆ ನಿಯಮದ ಅಡಿಯಲ್ಲಿ ಈ ಮುಂಚೆ ಮಾಡಲಾದ ಯಾವುದರ ಮಾನ್ಯತೆಗೂ ಪ್ರತಿಕೂಲವಾಗದಂತೆ ಸಂದರ್ಭಾನುಸಾರ ಅಥವಾ ಮಾರ್ಪಾಟಾದ ರೀತಿಯಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ.

18. ತೊಂದರೆಗಳನ್ನು ನಿವಾರಿಸಲು ಅಧಿಕಾರ : (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆಯು ಉದ್ಭವಿಸಿದರೆ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಲಾದ ಆದೇಶದ ಮೂಲಕ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ, ಅಗತ್ಯವೆಂದು ಅಥವಾ ಯುಕ್ತವೆಂದು ತನಗೆ ಕಂಡುಬರುವ ಉಪಬಂಧಗಳನ್ನು ಮಾಡಬಹುದು :

ಪರಂತು, ಅಂಥ ಯಾವುದೇ ಆದೇಶವನ್ನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಮುಕ್ತಾಯವಾದ ತರುವಾಯ ಮಂಡಿಸತಕ್ಕದ್ದಲ್ಲ.

(2) ಈ ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಆದೇಶವನ್ನು ಅದನ್ನು ಹೊರಡಿಸಿದ ತರುವಾಯ ಅದಷ್ಟು ಬೇಗನೆ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ನಾಗರೀಕರ ಹಿಂದುಳಿದ ವರ್ಗಗಳಿಗಾಗಿ ಈ ಮುಂದಿನ ಉದ್ದೇಶಗಳ ಸಲುವಾಗಿ ಒಂದು ಶಾಶ್ವತ ಆಯೋಗವನ್ನು ರಚಿಸಲು ಉಪಬಂಧ ಕಲ್ಪಿಸುವುದು ಅಗತ್ಯವೆಂದು ಪರಿಗಣಿಸಲಾಯಿತು,

(i) ಅವರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯನ್ನು ಖಚಿತ ಪಡಿಸಿಕೊಳ್ಳುವುದು;

(ii) ನಾಗರೀಕರ ಯಾವುದೇ ವರ್ಗವನ್ನು ಹಿಂದುಳಿದ ವರ್ಗವೆಂದು ಪಟ್ಟಿಯಲ್ಲಿ ಸೇರಿಸಬೇಕೆಂಬ ಮನವಿಗಳನ್ನು ಪರೀಕ್ಷಿಸುವುದು ಮತ್ತು ಹಿಂದುಳಿದ ವರ್ಗಗಳನ್ನು ಪಟ್ಟಿಯಲ್ಲಿ ಹೆಚ್ಚಾಗಿ ಸೇರಿಸಿರುವ ಅಥವಾ ಸೇರಿಸಿಲ್ಲದಿರುವ ಬಗ್ಗೆ ವಿಚಾರಣೆ ನಡೆಸುವುದು ;

(iii) ಹಿಂದುಳಿದ ವರ್ಗಗಳಿಗೆ ಸೇರಿದ ವ್ಯಕ್ತಿಗಳ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮತ್ತು ಸಮಸ್ಯೆಗಳ ಬಗ್ಗೆ ಸರ್ವೆ ಮಾಡುವುದು ; ಮತ್ತು

(iv) ಹಿಂದುಳಿದ ವರ್ಗಗಳಿಗಾಗಿ ರೂಪಿಸಿದ ಅನೇಕ ಕಲ್ಯಾಣ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆ ನಡೆಸುವುದು

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನ ಪತ್ರ

ಉದ್ದೇಶಿತ ಕ್ರಮದಿಂದಾಗಿ ವರ್ಷಕ್ಕೆ ಸರಿಸುಮಾರು 14.23 ಲಕ್ಷ ರೂ.ಗಳ ಅನಾವರ್ತಕ ವೆಚ್ಚ ಹಾಗೂ 19.29 ಲಕ್ಷ ರೂ.ಗಳ ಆವರ್ತಕ ವೆಚ್ಚವು ಉಂಟಾಗುತ್ತವೆ.

ಪ್ರತ್ಯಾಯೋಜಿತ ಶಾಸನ ರಚನಾಧಿಕಾರ ಕುರಿತು ಜ್ಞಾಪನ

2ನೇ ಖಂಡದ (ಸಿ) ಉಪ-ಖಂಡ, 4ನೇ ಖಂಡದ (4)ನೇ ಉಪಖಂಡ, 5ನೇ ಖಂಡದ (2)ನೇ ಉಪಖಂಡ, 10ನೇ ಖಂಡದ (1)ನೇ ಉಪಖಂಡದ (ಎಫ್) ಬಾಬು, 13ನೇ ಖಂಡದ (2)ನೇ ಉಪಖಂಡ ಮತ್ತು 13ನೇ ಖಂಡದ (5) ಮತ್ತು (6)ನೇ ಉಪಖಂಡಗಳು ಅವುಗಳಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗಾಗಿ ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರ ನೀಡುತ್ತದೆ.

ಪ್ರಸ್ತಾವಿತ ಪ್ರತ್ಯಾಯೋಜಿತ ಶಾಸನ ರಚನಾಧಿಕಾರವು ವಾಡಿಕೆಯ ಸ್ವರೂಪದ್ದಾಗಿರುತ್ತದೆ.

ರಮೇಶ್ ಎಸ್. ಜಿಗಜಿಣಗಿ,
ಸಮಾಜ ಕಲ್ಯಾಣ ಸಚಿವರು.

ನಿಂ.ಹು. ಮುತ್ತಲಗೇರಿ,
ಕಾರ್ಯದರ್ಶಿ.

BLANK PAGE